# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 279 (306)

ಉತ್ತರಿಸಬೇಕಾದ ದಿನಾಂಕ : 19.08.2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆ ಹುಮನಾಬಾದ್ ತಾಲ್ಲೂಕಿನ ಮೂಗನೂರ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದಾಗಿ ಜನರಿಗೆ ಹಾಗೂ ಜಾನುವಾರುಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಮೂಗನೂರ ಗ್ರಾಮದ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಜಲ ಜೀವನ್ ಮಿಷನ್ (JJM) ಯೋಜನೆಯಡಿ ಏಕ ಗ್ರಾಮ ಕುಡಿಯುವ ನೀರು ಯೋಜನೆ (SVS) ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಸದರಿ ಕಾಮಗಾರಿಯ ಅಂದಾಜು ಪ್ರಾವಧಾನದಂತೆ, ಗ್ರಾಮ ಪಂಚಾಯತ್ ಸುಲ್ತಾನಾಬಾದವಾಡಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಖಾಸಗಿ ವ್ಯಕ್ತಿಗಳಿಂದ ಖಾಸಗಿ ಜಮೀನಿನಲ್ಲಿ ದಿನಾಂಕ 02.11.2023 ರಂದು ದಾನಪತ್ರದ ಮೂಲಕ ಜಮೀನನ್ನು ಪಡೆದುಕೊಂಡಿರುತ್ತಾರೆ.<br><br>ಸದರಿ ಸ್ಥಳದಲ್ಲಿ ತೆರೆದ ಬಾವಿಯನ್ನು ನಿರ್ಮಿಸಲಾಗಿರುತ್ತದೆ. ಸದರಿ ಗ್ರಾಮದ ಕುಡಿಯುವ ನೀರಿನ ಕಾಮಗಾರಿಯನ್ನು ಭೌತಿಕವಾಗಿ ಪೂರ್ಣಗೊಳಿಸಿ, ಎಲ್ಲಾ ಕಾರ್ಯಾತ್ಮಕ ನಳ ಸಂಪರ್ಕಗಳ ಮೂಲಕ ಸಮರ್ಪಕವಾಗಿ ನೀರು ಸರಬರಾಜಾಗುತ್ತಿರುವುದನ್ನು ಖಚಿತಪಡಿಸಿಕೊಂಡ ನಂತರ, ಗ್ರಾಮವನ್ನು "ಹರ್ ಘರ್ ಜಲ್" ಎಂದು ಘೋಷಿಸಿ ಗ್ರಾಮಸ್ಥರಿಗೆ ನೀರು ಸರಬರಾಜು ಮಾಡಲಾಗುತ್ತಿದೆ. |
| ಆ | ಗ್ರಾಮದಲ್ಲಿ ಸರ್ಕಾರದ ವತಿಯಿಂದ ಖಾಸಗಿ ವ್ಯಕ್ತಿಗಳ ಹೊಲದಲ್ಲಿ ತೆರೆದ ಭಾವಿ ತೋಡಿಸಲಾಗಿದ್ದರೂ ಗ್ರಾಮದ ಜನರಿಗೆ ಕುಡಿಯಲು ನೀರು ಪೂರೈಕೆ ಮಾಡುತ್ತಿಲ್ಲದಿರುವುದಕ್ಕೆ ಕಾರಣವೇನು? (ಮಾಹಿತಿ ನೀಡುವುದು) | |

ಸಂಖ್ಯೆ:RDWSD/CE/TECH/221/2026-27, ದಿನಾಂಕ: 18.08.2026

(ಈಶ್ವರ್ ಬಿ ಖಂಡ್ರೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಸಚಿವರು.